ಕರ್ನಾಟಕ ಸರ್ಕಾರ

# ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ ಬೆಂಗಳೂರು-1

**ಸಂಖ್ಯೆ: ಎಡಿಎಂ-2(4) ಕಾ.ಬಾ.ಚ 01/2023-24** **ದಿನಾಂಕ: 26-07-2023**

## ಸುತ್ತೋಲೆ

**ವಿಷಯ:-** ಕಾನೂನುಬಾಹಿರ ಚಟುವಟಿಕೆಗಳ ಸಂಬಂಧ ಶಾಲಾ ಕಾಲೇಜುಗಳಲ್ಲಿ ಪಾಲಿಸಬೇಕಾದ ಕಾರ್ಯಗಳ ಕುರಿತು

**ಉಲ್ಲೇಖ:-** 1.ಈ ಕಛೇರಿ ಪತ್ರ ಸಂಖ್ಯೆ ಸಿ4(6)ಸಾ.ಸ್ಥ.ಧೂ.ನಿ 36/2008-09 ದಿನಾಂಕ:15.11.2010

2. ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಸಿ4(3)(2)ಆಶಾ:01/2010-11 ದಿನಾಂಕ:07.02.2013

3.ಸರ್ಕಾರದ ಆದೇಶ ಸಂಖ್ಯೆ ಇಡಿ 226 ಎಸ್.ಎಲ್.ಬಿ 2007 ದಿನಾಂಕ:05.10.2007

4.ಈ ಕಛೇರಿ ಸುತ್ತೋಲೆ ಸಂಖ್ಯೆ ಸಿ7(2)/ಪ್ರಾ.ಶಿ.ಅ/ಮಕ್ಕಳ ಸುರಕ್ಷತೆ 40/2014-15 ದಿನಾಂಕ:28.07.2016

5.ಈ ಕಛೇರಿ ಸುತ್ತೋಲೆ ಸಂಖ್ಯೆ ಸಿ4(6)ಸಾ.ಸ್ಥ.ಧೂ.ನಿ 36/2008-09 ದಿನಾಂಕ:14.11.2016

6.ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಎಡಿಎಂ2(1)ರಾ.ಐ.ಸ-02/2017-18 ದಿನಾಂಕ:12.04.2018

7.ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಸಿ7(2)ಪ್ರಾಶಿಅ/ಸ.ಸಾ.ವಾ/ಶಾ.ಮ.ಸಾ-72/2019-20 ದಿನಾಂಕ:16.08.2019

8.ಈ ಕಛೇರಿ ಜ್ಞಾಪನಾ ಪತ್ರ ಸಂಖ್ಯೆ ಸಿ7(2)ಪ್ರಾಶಿಅ-ಶಾ-ಮ-ಸು 30/2018-19 ದಿನಾಂಕ:18.10.2019

9.ಈ ಕಛೇರಿ ಸುತ್ತೋಲೆ ಸಂಖ್ಯೆ ಸಿ4(5)ಪ್ರೌ.ಶಿ/ಎಂಪಿಕ್/ಸುತ್ತೋಲೆ-1/2018-19 ದಿನಾಂಕ:30.01.2019

10.ಈ ಕಛೇರಿ ಸುತ್ತೋಲೆ ಸಂಖ್ಯೆ ಎಡಿಎಂ2(2)ಪೋ.ಕಾ.ಅನುಷ್ಠಾನ 01/2022-23 ದಿನಾಂಕ:08.11.2022

11.ಈ ಕಛೇರಿ ಜ್ಞಾಪನಾ ಸಂಖ್ಯೆ ಸಿ1(3)ಆಂ.ದೂ.ಸಮಿತಿ/2023-24 E110719 ದಿನಾಂಕ:20.06.2023

*******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಂತೆ ಈಗಾಗಲೇ ಹಲವಾರು ಬಾರಿ ಶಾಲಾ ಕಾಲೇಜುಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕಾದ ಕ್ರಮಗಳ ಬಗ್ಗೆ ಮತ್ತು ಕಾನೂನು ಬಾಹಿರ ಘಟನೆಗಳು ಜರುಗಿದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮೇಲ್ಕಂಡಂತೆ ಉಲ್ಲೇಖ-1 ರಿಂದ 11ರ ವರೆಗಿನ ಪತ್ರಗಳಲ್ಲಿ ವಿವರವಾದ ಸುತ್ತೋಲೆಗಳನ್ನು ಹೊರಡಿಸಿ ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ. ಆದಾಗ್ಯೂ ಕೆಲವು ಶಾಲಾ ಕಾಲೇಜುಗಳಲ್ಲಿ ಸದರಿ ಘಟನೆಗಳು ಜರುಗುತ್ತಿದ್ದು, ತೀರ್ವ ಕಟ್ಟೆಚ್ಚರ ವಹಿಸಲು ಈ ಕೆಳಕಂಡಂತೆ ಸೂಚಿಸಿದೆ.

ಉಲ್ಲೇಖ-1ರನ್ವಯ ಘನ ಉಚ್ಚನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ 17958/2009 ದಿನಾಂಕ:04/11/2009 ರ ತೀರ್ಪಿನಂತೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯ್ದೆಯನ್ನು ಕಟ್ಟು ನಿಟ್ಟಾಗಿ ಜಾರಿಗೊಳಿಸುವ ಸಂಬಂಧ "ಶಾಲಾ/ಕಾಲೇಜುಗಳ ಆವರಣದಿಂದ 100 ಗಜಗಳ ಅಂತರದಲ್ಲಿ ತಂಬಾಕುಯುಕ್ತ ವಸ್ತುಗಳ ಮಾರಾಟ ನಿಷೇಧದ ಬಗ್ಗೆ ಸೂಕ್ತ ಕ್ರಮವಹಿಸಿ ಅನುಷ್ಠಾನಗೊಳಿಸಲು ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

............2

ಉಲ್ಲೇಖ-2ರನ್ವಯ ಶಾಲಾ ಆವರಣವು ಶಾಲೆಯಲ್ಲಿ ಮಕ್ಕಳಿಗೆ ದೈನಂದಿನ ಪಾಠ ಪ್ರವಚನಗಳೊಂದಿಗೆ ಪಠ್ಯೇತರ ಚಟುವಟಿಕೆಗಳು ಮತ್ತು ಆಟೋಟ ಕಾರ್ಯಕ್ರಮಗಳು, ಶಾರೀರಿಕ ಶಿಕ್ಷಣ ಹಾಗೂ ವ್ಯಾಯಾಮ ಮತ್ತಿತರ ಶೈಕ್ಷಣಿಕ ಚಟುವಟಿಕೆಗಳಿಗೆ ಮಾತ್ರ ಸದ್ವಿನಿಯೋಗವಾಗಬೇಕು. ಯಾವುದೇ ಕಾರಣಕ್ಕೂ ಶೈಕ್ಷಣಿಕೇತರ ಚಟುವಟಿಕೆಗಳಿಗೆ/ ಉದ್ದೇಶಗಳಿಗೆ ಬಳಸಬಾರದಾಗಿ ಹಾಗೂ ಅನುಮತಿ ನೀಡಬಾರದಾಗಿ ಸೂಚಿಸಲಾಗಿರುತ್ತದೆ.

ಉಲ್ಲೇಖ-3ರನ್ವಯ ರಾಜ್ಯದ ಎಲ್ಲಾ ಸರ್ಕಾರಿ , ಅನುದಾನಿತ ಹಾಗೂ ಅನುದಾನರಹಿತ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ ಶಾಲಾ ಅವಧಿಯಲ್ಲಿ ಹಾಗೂ ಶಾಲಾ ಕಾಲೇಜುಗಳ ಆವರಣದಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿರುತ್ತದೆ.

ಉಲ್ಲೇಖ-4ರನ್ವಯ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016ನ್ನು ಜಾರಿಗೆ ತಂದಿದ್ದು, ಇದರಲ್ಲಿ ಶಾಲೆಗಳಲ್ಲಿ ಮಕ್ಕಳು ಶೋಷಣೆಗೊಳಗಾಗುವುದನ್ನು ತಪ್ಪಿಸಲು ಕಡ್ಡಾಯವಾಗಿ ಅನುಸರಿಸಬೇಕಾದ ಕ್ರಮಗಳನ್ನೊಳಗೊಂಡ ನೀತಿಯನ್ನು ರೂಪಿಸಿ ಕಾರ್ಯರೂಪಕ್ಕೆ ತಂದಿರುತ್ತದೆ.

ಉಲ್ಲೇಖ-5ರನ್ವಯ ಸಿಗರೇಟ್ ಮತ್ತು ತಂಬಾಕು ಉತ್ಪನ್ನಗಳ (ಜಾಹಿರಾತು, ನಿಷೇಧ ಮತ್ತು ವ್ಯಾಪಾರ ವಾಣಿಜ್ಯ ಉತ್ಪಾದನೆ ಪೂರೈಕೆ ಮತ್ತು ವಿತರಣೆ ನಿಯಂತ್ರಣ ) ಅಧಿನಿಯಮ-2003ನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ಸರ್ಕಾರಿ, ಅನುದಾನಿತ, ಮತ್ತು ಅನುದಾನರಹಿತ ಎಲ್ಲಾ ಶಾಲಾ ಕಾಲೇಜುಗಳಲ್ಲಿ ತಂಬಾಕುಯುಕ್ತ ಉತ್ಪನ್ನಗಳಿಂದ ಶಾಲಾ ಮಕ್ಕಳು/ಕುಟುಂಬ/ಸಮಾಜದ ಮೇಲೆ ಆಗುವ ದುಷ್ಪರಿಣಾಮಗಳ ಬಗ್ಗೆ ಮಕ್ಕಳಿಗೆ ಹಾಗೂ ಪೋಷಕರಿಗೆ ಪರಿಪೂರ್ಣವಾಗಿ ಅರಿವು ಮೂಡಿಸಲು ಎಸ್.ಡಿ.ಎಂ.ಸಿ ಹಾಗೂ ಶಾಲಾಭಿವೃದ್ಧಿ ಸಮಿತಿ/ಶಿಕ್ಷಕರು/ರಕ್ಷಕ ಸಮಿತಿ/ಮಕ್ಕಳ ಸುರಕ್ಷಾ ಸಮಿತಿ ಹಾಗೂ ಎನ್.ಸಿ.ಸಿ, ಎನ್.ಎಸ್.ಎಸ್ ಇನ್ನಿತರ ಸಮಿತಿಗಳ ಪೂರ್ಣ ಸಹಕಾರ ಪಡೆದು ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ.

ಉಲ್ಲೇಖ-6ರನ್ವಯ ಮಾದಕ ವಸ್ತುಗಳ ಮಾರಾಟ, ಹಾಗೂ ಬಳಕೆಯ ವಿರುದ್ಧ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಬೆಂಗಳೂರು ನಗರ ಪೋಲೀಸರು 1908 ಎಂಬ ನಾಲ್ಕು ಅಂಕಿಗಳ ಶುಲ್ಕ ರಹಿತ ದೂರವಾಣಿಯನ್ನು ಪರಿಚಯಿಸಿದ್ದು, ಇದನ್ನು ಇಲಾಖೆಗೆ ಪರಿಚಯಿಸಿ ಸದ್ಬಳಕೆ ಮಾಡಿಕೊಳ್ಳಲು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ  ಶಾಲೆಗಳಲ್ಲಿ 1908 ಎಂಬ ನಾಲ್ಕು ಅಂಕಿಗಳ ಶುಲ್ಕ ರಹಿತ ದೂರವಾಣಿ ಸಂಖ್ಯೆಯನ್ನು ಪರಿಚಯ ಮಾಡುವ ಸಂಬಂಧ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

ಉಲ್ಲೇಖ-7ರನ್ವಯ ಸರಕು ಸಾಗಾಣಿಕೆ ವಾಹನಗಳಲ್ಲಿ ಕೂಲಿ ಕಾರ್ಮಿಕರು/ಶಾಲಾ ಮಕ್ಕಳು ಹಾಗೂ ಇನ್ನಿತರೆ ಪ್ರಯಾಣಿಕರನ್ನು ಕಾನೂನುಬಾಹಿರವಾಗಿ ಸಾಗಿಸುತ್ತಿರುವ ಬಗ್ಗೆ ಉಚ್ಚನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ 12181/2019ಅನ್ನು ಕರ್ನಾಟಕ ಕಾನೂನು ಸೇವೆಗಳ ದಾಖಲಿಸಲಾಗಿದ್ದು, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಪರಿಣಾಮಕಾರಿಯಾದ ಕ್ರಿಯಾಯೋಜನೆಯನ್ನು ರೂಪಿಸಿ ಈ ಬಗ್ಗೆ ಪೋಲೀಸ್, ಕಾರ್ಮಿಕ ಇಲಾಖೆ ಮತ್ತು ಶಿಕ್ಷಣ ಇಲಾಖೆಗಳು ಪಾಲುದಾರಿಕೆ ಇಲಾಖೆಗಳಾಗಿದ್ದು, ಈ ನಿಟ್ಟಿನಲ್ಲಿ ತಕ್ಷಣವೇ ಕಾರ್ಯಚರಣೆಯನ್ನು ಕೈಗೊಂಡು ಅಪಘಾತಕ್ಕೀಡಾಗುವ ಪ್ರಕರಣಗಳು ಹೆಚ್ಚಾಗಿರುವುದನ್ನು ಗಮನಿಸಿ ಇಂತಹ ಅಪಾಯಕಾರಿ ಹಾಗೂ ಅಸುರಕ್ಷಿತವಾದ ಜನರ ಪ್ರಯಾಣವನ್ನು ತಡೆಗಟ್ಟಲು ರಾಜ್ಯದ ಎಲ್ಲಾ ಶಾಲಾ ಆಡಳಿತ ಮಂಡಳಿ/ಮುಖ್ಯಸ್ಥರುಗಳಿಗೆ ಶಾಲಾ ಸುರಕ್ಷತೆ ಮತ್ತು ಮಕ್ಕಳ ಸುರಕ್ಷತೆ ಹಿತದೃಷ್ಟಿಯಿಂದ ಶಾಲೆಗಳಲ್ಲಿ ಸರಕು ಸಾಗಾಣಿಕೆ ವಾಹನಗಳಲ್ಲಿ ಶಾಲಾ ಮಕ್ಕಳನ್ನು ಮೋಟಾರು ವಾಹನ ಕಾಯಿದೆ/ನಿಯಮಗಳನ್ನು ಉಲ್ಲಂಘಿಸಿ ಸುರಕ್ಷಿತವಲ್ಲದ ರೀತಿಯಲ್ಲಿ

............3

ಕಾರ್ಯಚರಣೆಯನ್ನು ಮಾಡುತ್ತಿರುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುವಂತೆ ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

ಉಲ್ಲೇಖ-8ರನ್ವಯ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನವದೆಹಲಿ ಇವರು ಶಾಲೆಯಲ್ಲಿ ಮಕ್ಕಳ ಸುರಕ್ಷತೆ ಮತ್ತು ಭದ್ರತೆಯ ಕುರಿತು ಹೊರಡಿಸಿರುವ ಮಾರ್ಗಸೂಚಿಯನ್ನು ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಅನುಸರಿಸುವಂತೆ ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

ಉಲ್ಲೇಖ-9ರನ್ವಯ ಶಿಕ್ಷಕರು ಗುಣಾತ್ಮಕ ಶಿಕ್ಷಣದ ಬಗ್ಗೆ ಗಮನಹರಿಸದೆ ವಿವಿಧ ಸಭೆ ಸಮಾರಂಭಗಳಲ್ಲಿ ಭಾಗವಹಿಸಲು ಆಸಕ್ತಿ ತೋರುತ್ತಿರುವುದರಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ತೊಡಕು ಉಂಟಾಗುತ್ತಿರುವುದನ್ನು ಗಮನಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಸರ್ವತೋಮುಖ ಪ್ರಗತಿಗೆ ಕಾರಣವಾಗುವಂತೆ ಶಿಕ್ಷಕರು ಶಾಲಾ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ನಿರ್ದೇಶಿಸಲಾಗಿರುತ್ತದೆ.

ಉಲ್ಲೇಖ-10ರನ್ವಯ ಮಕ್ಕಳ ಮೇಲೆ ಪದೇ ಪದೇ ಲೈಂಗಿಕ ದೌರ್ಜನ್ಯಗಳು, ಕಿರುಕುಳ, ಅತ್ಯಾಚಾರಗಳು ನಡೆಯುತ್ತಿದ್ದು, ಈ ರೀತಿಯ ದುರ್ಘಟನೆಗಳನ್ನು ತಡೆಗಟ್ಟಲು ಹಾಗೂ ಮಕ್ಕಳಿಗೆ ರಕ್ಷಣೆ, ಭದ್ರತೆ, ಮತ್ತು ನ್ಯಾಯ ಒದಗಿಸುವುದರ ಜೊತೆಗೆ ಅವರ ಆಸಕ್ತಿ ಮತ್ತು ಹಿತ ಕಾಪಾಡುವ ಉದ್ದೇಶಗಳನ್ನು ಇರಿಸಿಕೊಂಡು ಪೋಕ್ಸೋಕಾಯಿದೆ-2012ನ್ನು ಭಾರತ ಸರ್ಕಾರವು ಜಾರಿಗೊಳಿಸಿದ್ದು, ಇದರಂತೆ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಪೋಕ್ಸೋ ಕಾಯಿದೆ 2012 ಮತ್ತು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ -2016 ಮತ್ತು ಕರ್ನಾಟಕ ರಾಜ್ಯ ಮಕ್ಕಳ ಆಯೋಗದ ಎಸ್.ಓ.ಪಿ ಮತ್ತು ಮಾರ್ಗಸೂಚಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು, ಶಾಲೆಗಳು, ಆಡಳಿತ ಮಂಡಳಿಗಳು ಪೋಷಕರು, ಎಸ್.ಡಿ.ಎಂ.ಸಿ ಹಾಗೂ ಇತರರು ಸೇರಿದಂತೆ ಉಪನಿರ್ದೇಶಕರು (ಆಡಳಿತ) ರವರಿಗೆ ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ.

ಉಲ್ಲೇಖ-11ರನ್ವಯ ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ/ಸಿಬ್ಬಂದಿಗಳಿಗೆ ಸಹೋದ್ಯೋಗಿಗಳಿಗೆ ಕಿರುಕುಳ ನೀಡುವುದು, ಅಸಭ್ಯ ವರ್ತನೆ, ಮಾನಸಿಕ ಹಿಂಸೆ, ದುರುದ್ದೇಶ ಪೂರ್ವಕವಾಗಿ ಕೆಲಸಕ್ಕೆ ಅಡಚಣೆ ಉಂಟುಮಾಡುವುದು ಹಾಗೂ ಲೈಂಗಿಕ ದೌರ್ಜನ್ಯ ಮುಂತಾದ ದೂರುಗಳಿಗೆ ಸಂಬಂಧಿಸಿದಂತೆ ಸ್ವೀಕೃತವಾದ ದೂರುಗಳನ್ನು ಪರಿಹರಿಸಲು ಸರ್ಕಾರದ ನಿರ್ದೇಶನದಂತೆ ಆಂತರಿಕ ದೂರು ಸಮಿತಿಯನ್ನು ರಚನೆ ಮಾಡಿ ಸ್ವೀಕರಿಸಲಾಗುವ ದೂರುಗಳನ್ನು ನಿಯಮಾನುಸಾರ ಪರಿಶೀಲಿಸಿ ನಿಗಧಿತ ಕಾಲಾವಧಿಯೊಳಗೆ ಪರಿಹರಿಸಲು ನಿರ್ದೇಶನ ನೀಡಲಾಗಿರುತ್ತದೆ.

ಈ ಮೇಲ್ಕಂಡಂತೆ ಉಲ್ಲೇಖ-1 ರಿಂದ 11ರವರೆಗಿನ ಪತ್ರಗಳನ್ವಯ ಸೂಚಿಸಿರುವ ಎಲ್ಲಾ ಅಂಶಗಳನ್ನು ಪಾಲಿಸುವುದರೊಂದಿಗೆ ಶಾಲಾ-ಕಾಲೇಜುಗಳಲ್ಲಿ ಇತರೆ ಯಾವುದಾದರೂ ಕಾನೂನು ಬಾಹಿರ ಚಟುವಟಿಕೆಗಳು ನಡೆಯುವುದು ಕಂಡು ಬಂದಲ್ಲಿ ಸಂಬಂಧಿಸಿದ ಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಶಾಲಾ ಎಸ್.ಡಿಎಂಸಿ ರವರು ಶಾಲೆಗಳಲ್ಲಿ ಪೋಷಕರ ಮತ್ತು ಶಿಕ್ಷಕರ

..........4

ಸಭೆಯಲ್ಲಿ ಪೋಷಕರಿಗೆ ಈ ವಿಷಯದ ಕುರಿತು ಪರಿಪೂರ್ಣ ಮಾಹಿತಿ ನೀಡಿ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಕ್ರಮವಹಿಸಲು ತಿಳಿಸಿದೆ. ಈ ವಿಷಯದ ಬಗ್ಗೆ ಶಾಲಾ ಹಂತದಲ್ಲಿ ರಚನೆಯಾಗಿರುವ ಎಸ್.ಡಿ.ಎಂ.ಸಿ ಹಾಗೂ ಶಾಲಾಭಿವೃದ್ಧಿ ಸಮಿತಿ/ಶಿಕ್ಷಕರು/ರಕ್ಷಕ ಸಮಿತಿ/ಮಕ್ಕಳ ಸುರಕ್ಷಾ ಸಮಿತಿಗಳ/ಶಾಲಾ ಆಡಳಿತ ಮಂಡಳಿಗಳ ಪೂರ್ಣ ಸಹಕಾರ ಪಡೆದು ನಿರ್ದಾಕ್ಷಣ್ಯದಿಂದ ಶಿಸ್ತು ಕ್ರಮವಹಿಸುವುದು. ಹಾಗೂ ಶಿಕ್ಷಕರುಗಳು/ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ ಮೇಲ್ಕಂಡ ಆದೇಶಗಳನ್ವಯ ಮೇಲಧಿಕಾರಿಗಳ ಗಮನಕ್ಕೆ ತಂದು ಪ್ರಕರಣ ಇತ್ಯರ್ಥಗೊಳಿಸಲು ಸೂಚಿಸಿದೆ.

20.10.2020

ಆಯುಕ್ತರು

ಶಾಲಾ ಶಿಕ್ಷಣ ಇಲಾಖೆ

**ಇವರಿಗೆ**

**1.** ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ. ರವರಿಗೆ ಅಗತ್ಯ ಕ್ರಮಕ್ಕಾಗಿ

2. ರಾಜ್ಯದ ಎಲ್ಲಾ ಪ್ರಾಂಶುಪಾಲರು,ಡಯಟ್ ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ. ರವರಿಗೆ ಅಗತ್ಯ ಕ್ರಮಕ್ಕಾಗಿ

3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ

4. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು**

**1.** ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಧಾರವಾಡ / ಕಲಬುರಗಿ.

2. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ

3.ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ.

4. ಸಹ ನಿರ್ದೇಶಕರು(ಶಾಲಾ ಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.

5.ನಿರ್ದೆಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು

6. ನಿರ್ದೇಶಕರು ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು

7. ಕಛೇರಿ ಪ್ರತಿ